# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ , ಬಿ. ಹೆಚ್. ರಸ್ತೆ , ತುಮಕೂರು - 572 103 ☎ : 0816-2255650 , 2273511 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ:ಪವಿ:2023-24 | 347 ದಿನಾಂಕ:31.07.2023

## : ಸುತ್ತೋಲೆ :

ವಿಷಯ : 2022-23 ನೇ ಶೈಕ್ಷಣಿಕ ಸಾಲಿನ ಪ್ರಥಮ ಸೆಮಿಸ್ಟರ್‌ನ ಪೂರಕ ವಿದ್ಯಾರ್ಥಿಗಳಿಂದ ಪರೀಕ್ಷಾ ಸಿದ್ಧತಾ ಶುಲ್ಕವನ್ನು ಬಾಹ್ಯವಾಗಿ ಪಡೆಯುವ ಬಗ್ಗೆ.

ಉಲ್ಲೇಖ : ಈ ಕಚೇರಿ ಅಧಿಸೂಚನೆ ಸಂಖ್ಯೆ:ತುವಿ:ಪವಿ:2023-24/341 ದಿನಾಂಕ:28.07.2023

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022-23 ನೇ ಶೈಕ್ಷಣಿಕ ಸಾಲಿನ 2023 ರ ಆಗಸ್ಟ್ ಮಾಹೆಯಲ್ಲಿ ನಡೆಯಲಿರುವ ಸಿ.ಬಿ.ಸಿ.ಎಸ್. ಪಠ್ಯಕ್ರಮದಂತೆ UUCMS ತಂತ್ರಾಂಶದ ಮೂಲಕ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳಿಗೆ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ (ನವೀನ & ಪೂರಕ) ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳಲು ಈಗಾಗಲೇ ಉಲ್ಲೇಖದನ್ವಯ ಅಧಿಸೂಚನೆ ಹೊರಡಿಸಲಾಗಿರುತ್ತದೆ.

ಸದರಿ ಅಧಿಸೂಚನೆಯನ್ವಯ ಪ್ರಥಮ ಸೆಮಿಸ್ಟರ್‌ನ ಪೂರಕ ವಿದ್ಯಾರ್ಥಿಗಳ **ಪರೀಕ್ಷಾ ಸಿದ್ಧತಾ ಶುಲ್ಕ (Processing Fee) ರೂ. 35-00/- (ಮೂವತ್ತೈದು ರೂಪಾಯಿಗಳು ಮಾತ್ರ)** ಗಳನ್ನು ತಾಂತ್ರಿಕ ಕಾರಣಗಳಿಂದಾಗಿ ಯುಯುಸಿಎಂಎಸ್ ತಂತ್ರಾಂಶದ ಮುಖಾಂತರ ಪಡೆಯಲು ಸಾಧ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ **ಪ್ರಥಮ ಸೆಮಿಸ್ಟರ್‌ನ ಪರೀಕ್ಷಾ ಶುಲ್ಕ ಪಾವತಿಸುವ ಪೂರಕ ವಿದ್ಯಾರ್ಥಿಗಳಿಂದ ಬಾಹ್ಯವಾಗಿ ರೂ. 35-00/- (ಮೂವತ್ತೈದು ರೂಪಾಯಿಗಳು ಮಾತ್ರ)** ಗಳನ್ನು ಪಡೆದು **ದಿನಾಂಕ:14.08.2023 ರೊಳಗೆ ವಿಶ್ವವಿದ್ಯಾನಿಲಯದ ನಿಧಿಗೆ ಪಾವತಿಸಲು ಸೂಚಿಸಲಾಗಿದೆ.** ಮುಂದುವರೆದು ಈಗಾಗಲೇ ಉಲ್ಲೇಖಿತ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಸಂಬಂಧಿಸಿದ ಕಾಲೇಜಿನವರು ಯುಯುಸಿಎಂಎಸ್ ಮೂಲಕ ವಿದ್ಯಾರ್ಥಿಗಳು ಪಾವತಿಸಿರುವ ಪರೀಕ್ಷಾ ಶುಲ್ಕದ ವಿವರಗಳೊಂದಿಗೆ ಬಾಹ್ಯವಾಗಿ ಪಡೆಯಲಾಗಿರುವ ಮೊತ್ತದ ಪ್ರತ್ಯೇಕ ಪಟ್ಟಿಯನ್ನು ಸಿದ್ಧಪಡಿಸಿ ನಿಗದಿತ ಕೊನೆಯ ದಿನಾಂಕದೊಳಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಈ ಮೂಲಕ ತಮಗೆ ತಿಳಿಸಲಾಗಿದೆ.

31/7/23

**ಕುಲಸಚಿವರು (ಮೌಲ್ಯಮಾಪನ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಶಿಕ್ಷಣ (ಬಿ.ಇಡಿ.) ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು :

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಉಪಕುಲಸಚಿವರು(ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - **ಇಂದೇ ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಬಿ.ಇಡಿ. ಕಾಲೇಜುಗಳಿಗೆ ಇ-ಮೇಲ್ ಕಳುಹಿಸುವುದು.**
6. ವಿಭಾಗದ ಮೇಲ್ವಿಚಾರಕರು, ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಕಛೇರಿ ಪ್ರತಿ.